# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** 2024-25ನೇ ಸಾಲಿಗೆ ರಾಜ್ಯದ ಸರ್ಕಾರಿ ಮತ್ತು ಖಾಸಗಿ ನರ್ಸಿಂಗ್ ಕಾಲೇಜುಗಳಲ್ಲಿನ ಬಿ.ಎಸ್ಸಿ ನರ್ಸಿಂಗ್ ಕೋರ್ಸುಗಳಿಗೆ ಸೀಟು ಹಂಚಿಕೆ ಮತ್ತು ಪ್ರವೇಶ ಶುಲ್ಕವನ್ನು ನಿಗಧಿಪಡಿಸುವ ಬಗ್ಗೆ.

**ಓದಲಾಗಿದೆ:** ನಿರ್ದೇಶಕರು, ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯ ಇವರ ಏಕ ಕಡತ ಸಂಖ್ಯೆ: DME/NUR/NRC1/71/2024

*******

**ಪ್ರಸ್ತಾವನೆ:**

ಮೇಲೆ ಓದಲಾದ ಏಕ ಕಡತ ಪ್ರಸ್ತಾವನೆಯಲ್ಲಿ 2024-25ನೇ ಸಾಲಿಗೆ ರಾಜ್ಯದ ಸರ್ಕಾರಿ ಮತ್ತು ಖಾಸಗಿ ನರ್ಸಿಂಗ್ ಕಾಲೇಜುಗಳಲ್ಲಿನ ಬಿ.ಎಸ್ಸಿ ನರ್ಸಿಂಗ್ ಕೋರ್ಸುಗಳ ಪ್ರವೇಶ ಪ್ರಕ್ರಿಯೆ ಹಾಗೂ ಶುಲ್ಕ ನಿಗಧಿಗೆ ಸಂಬಂಧಿಸಿದಂತೆ ಸರ್ಕಾರವು ಕರ್ನಾಟಕ ಸ್ಟೇಟ್ ಅಸೋಸಿಯೇಷನ್ ಆಫ್ ದಿ ಮ್ಯಾನೇಜ್‌ಮೆಂಟ್ ಆಫ್ ನರ್ಸಿಂಗ್ & ಅಲೈಡ್ ಹೆಲ್ತ್ ಸೈನ್ಸ್ ಇನ್ಸ್ಟಿಟ್ಯೂಷನ್, ಬೆಂಗಳೂರು, ಕರ್ನಾಟಕ ಸ್ಟೇಟ್ ಪ್ರೈವೇಟ್ ಮ್ಯಾನೇಜ್‌ಮೆಂಟ್ ಅಸೋಸಿಯೇಷನ್ ಆಫ್ ಹೆಲ್ತ್ ಇನ್ಸ್ಟಿಟ್ಯೂಷನ್ (ರಿ), ಬೆಂಗಳೂರು ಮತ್ತು ನವ ಕಲ್ಯಾಣ ಕರ್ನಾಟಕ ನರ್ಸಿಂಗ್ ಇನ್ಸ್ಟಿಟ್ಯೂಟ್ ಮ್ಯಾನೇಜ್‌ಮೆಂಟ್ ಅಸೋಸಿಯೇಷನ್ (ರಿ), ಕಲಬುರಗಿ ಇವರುಗಳೊಂದಿಗೆ ಪರಸ್ಪರ ಒಡಂಬಡಿಕೆ ಮಾಡಿಕೊಳ್ಳುವ ಕುರಿತು ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರ ಅಧ್ಯಕ್ಷತೆಯಲ್ಲಿ ದಿನಾಂಕ:13-06-2024ರಂದು ನಡೆದ ಸಭೆಯಲ್ಲಿ, ಖಾಸಗಿ ಬಿ.ಎಸ್ಸಿ ನರ್ಸಿಂಗ್ ಕಾಲೇಜುಗಳಲ್ಲಿನ ಶುಲ್ಕ ಹೆಚ್ಚಳ ಹಾಗೂ ಇನ್ನಿತರೆ ಕೆಲವು ಬೇಡಿಕೆಗಳನ್ನು ಸಲ್ಲಿಸಿರುತ್ತಾರೆ.

2024-25 ನೇ ಶೈಕ್ಷಣಿಕ ವರ್ಷಕ್ಕೆ B.Sc. Nursing ಕೋರ್ಸ್ ನ ಪ್ರವೇಶಕ್ಕಾಗಿ ಖಾಸಗಿ ಕಾಲೇಜುಗಳಲ್ಲಿನ ಸರ್ಕಾರಿ ಕೋಟಾದ ಸೀಟುಗಳು 20%, ಖಾಸಗಿ ಕಾಲೇಜುಗಳಲ್ಲಿನ ಖಾಸಗಿ ಕೋಟಾದ 60% ಸೀಟುಗಳನ್ನು KEA ಮೂಲಕ ಹಂಚಿಕೆ ಮಾಡಲು ಹಾಗೂ ಖಾಸಗಿ ಕಾಲೇಜುಗಳಲ್ಲಿನ 20% ಸೀಟುಗಳನ್ನು ಮ್ಯಾನೇಜ್‌ಮೆಂಟ್ ಮೂಲಕ ಭರ್ತಿ ಮಾಡಿಕೊಳ್ಳಲು ಕರ್ನಾಟಕ ಸ್ಟೇಟ್ ಅಸೋಸಿಯೇಷನ್ ಆಫ್ ದಿ ಮ್ಯಾನೇಜ್‌ಮೆಂಟ್ ಆಫ್ ನರ್ಸಿಂಗ್ & ಅಲೈಡ್ ಹೆಲ್ತ್ ಸೈನ್ಸ್ ಇನ್ಸ್ಟಿಟ್ಯೂಷನ್, ಬೆಂಗಳೂರು, ಕರ್ನಾಟಕ ಸ್ಟೇಟ್ ಪ್ರೈವೇಟ್ ಮ್ಯಾನೇಜ್ ಮೆಂಟ್ ಅಸೋಸಿಯೇಷನ್ ಆಫ್ ಹೆಲ್ತ್ ಇನ್ಸ್ಟಿಟ್ಯೂಷನ್ (ರಿ)ಬೆಂಗಳೂರು ಮತ್ತು ನವ ಕಲ್ಯಾಣ ಕರ್ನಾಟಕ ನರ್ಸಿಂಗ್ ಇನ್ಸ್ಟಿಟ್ಯೂಟ್ ಮ್ಯಾನೇಜ್‌ಮೆಂಟ್ ಅಸೋಸಿಯೇಷನ್ (ರಿ), ಕಲಬುರಗಿ ಸಂಸ್ಥೆಗಳ ಸದಸ್ಯತ್ವಕ್ಕೊಳಪಡುವ ಖಾಸಗಿ ನರ್ಸಿಂಗ್ ಸಂಸ್ಥೆಗಳಿಗೆ ಅನುಮತಿ ನೀಡಲು ಸಭೆಯಲ್ಲಿ ನಿರ್ಣಯಿಸಲಾಯಿತು. ಅದರಂತೆ, ಸಂಬಂಧಿಸಿದ ಖಾಸಗಿ ನರ್ಸಿಂಗ್ ಕಾಲೇಜುಗಳ ಸಂಘಗಳೊಂದಿಗೆ ಮಾಡಿಕೊಳ್ಳಲಾಗಿರುವ ಒಡಂಬಡಿಕೆಯನ್ವಯ ಸೀಟು ಹಂಚಿಕೆ ಮತ್ತು ಶುಲ್ಕ ನಿಗಧಿಗೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಮೇಲಿನ ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 2024-25ನೇ ಸಾಲಿಗೆ ರಾಜ್ಯದ ಸರ್ಕಾರಿ ಮತ್ತು ಖಾಸಗಿ ನರ್ಸಿಂಗ್ ಕಾಲೇಜುಗಳಲ್ಲಿ ಬಿ.ಎಸ್ಸಿ ನರ್ಸಿಂಗ್ ಕೋರ್ಸುಗಳ ಪ್ರವೇಶ

ಪ್ರಕ್ರಿಯೆ ಮತ್ತು ಪಾವತಿಸಬೇಕಾದ ಶುಲ್ಕವನ್ನು ನಿಗಧಿಪಡಿಸುವ ಕುರಿತು ಕೂಲಂಕಷವಾಗಿ ಪರಿಶೀಲಿಸಲಾಗಿರುತ್ತದೆ. ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಎಂಇಡಿ 356 ಎಂಎಸ್ಎಫ್ 2024, ದಿನಾಂಕ:24-07-2024.**

2024-25ನೇ ಸಾಲಿಗೆ ರಾಜ್ಯದ ಸರ್ಕಾರಿ ಮತ್ತು ಖಾಸಗಿ ನರ್ಸಿಂಗ್ ಕಾಲೇಜುಗಳಲ್ಲಿನ ಬಿ.ಎಸ್ಸಿ ನರ್ಸಿಂಗ್ ಕೋರ್ಸುಗಳ ಪ್ರವೇಶಾತಿಗೆ ಸಂಬಂಧಿಸಿದಂತೆ ಸೀಟುಗಳ ಹಂಚಿಕೆ ಮತ್ತು ಬೋಧನಾ ಶುಲ್ಕವನ್ನು ಈ ಕೆಳಕಂಡಂತೆ ನಿಗಧಿಪಡಿಸಿ ಆದೇಶಿಸಲಾಗಿದೆ.

2024-25ನೇ ಸಾಲಿಗೆ ರಾಜ್ಯದ ಸರ್ಕಾರಿ ಮತ್ತು ಖಾಸಗಿ ನರ್ಸಿಂಗ್ ಕಾಲೇಜುಗಳಲ್ಲಿನ ಬಿ.ಎಸ್ಸಿ ನರ್ಸಿಂಗ್ ಕೋರ್ಸುಗಳ ಪ್ರವೇಶಾತಿಗೆ ಸೀಟು ಹಂಚಿಕೆ ವಿವರ ಈ ಕೆಳಕಂಡಂತಿರುತ್ತದೆ: -

| | |
|---|---|
| Government Quota Seats in Private Nursing Institutions to be filled through KEA | 20% |
| Private Quota Seats in Private Nursing Institutions to be filled through KEA | 60% |
| Management Seats | 20% |

2024-25ನೇ ಸಾಲಿಗೆ ರಾಜ್ಯದಲ್ಲಿನ ಸರ್ಕಾರಿ ಮತ್ತು ಖಾಸಗಿ ನರ್ಸಿಂಗ್ ಕಾಲೇಜುಗಳಲ್ಲಿನ ಬಿ.ಎಸ್ಸಿ ನರ್ಸಿಂಗ್ ಕೋರ್ಸುಗಳ ಪ್ರವೇಶಾತಿಗೆ ಬೋಧನಾ ಶುಲ್ಕವನ್ನು ಈ ಕೆಳಕಂಡಂತೆ ನಿಗದಿಪಡಿಸಲಾಗಿದೆ: -

<table>
<tr><th>Category</th><th colspan="2">Fee</th></tr>
<tr><td>Government Quota Seats in Government Colleges</td><td colspan="2">Rs.10,000/- per year</td></tr>
<tr><td>Government Quota Seats in Private Colleges (20%)</td><td colspan="2">Rs.10,000/- per year</td></tr>
<tr><td rowspan="2">Management Quota Seats (60%)</td><td>Domicile of Karnataka</td><td>Rs.1,00,000/- per year</td></tr>
<tr><td>Non Domicile of Karnataka</td><td>Rs.1,40,000/- per year</td></tr>
</table>

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

24/07/24

**(ಆರ್.ಮಂಜುನಾಥ)**
ಸರ್ಕಾರದ ಅಧೀನ ಕಾರ್ಯದರ್ಶಿ-3,
ವೈದ್ಯಕೀಯ ಶಿಕ್ಷಣ ಇಲಾಖೆ.

**ಇವರಿಗೆ:**

1. ಪ್ರಧಾನ ಮಹಾಲೇಖಪಾಲರು (ಜಿ&ಎಸ್ಎಸ್ಎ), ಕರ್ನಾಟಕ, ಹೊಸಕಟ್ಟಡ, "ಆಡಿಟ್ ಭವನ", ಅಂಚೆಪೆಟ್ಟಿಗೆ ಸಂಖ್ಯೆ:5398, ಬೆಂಗಳೂರು -560001.

2. ಪ್ರಧಾನ ಮಹಾಲೇಖಪಾಲರು (ಜಿ&ಇ&ಆರ್‌ಎಸ್‌ಎ), ಕರ್ನಾಟಕ, ಹೊಸಕಟ್ಟಡ, "ಆಡಿಟ್ ಭವನ", ಅಂಚೆಪೆಟ್ಟಿಗೆ ಸಂಖ್ಯೆ:5398, ಬೆಂಗಳೂರು -560001.
3. ಪ್ರಧಾನ ಮಹಾಲೇಖಪಾಲರು (ಎ&ಇ), ಕರ್ನಾಟಕ, ಪಾರ್ಕ್ ರಸ್ತೆ, ಅಂಚೆಪೆಟ್ಟಿಗೆ ಸಂಖ್ಯೆ:5329, ಬೆಂಗಳೂರು-560001.
4. ಕಾರ್ಯಕಾರಿ ನಿರ್ದೇಶಕರು, ಕರ್ನಾಟಕ ಪರೀಕ್ಷಾ ಪ್ರಾಧಿಕಾರ, ಸಂಪಿಗೆ ರಸ್ತೆ, 18ನೇ ಕ್ರಾಸ್, ಮಲ್ಲೇಶ್ವರಂ, ಬೆಂಗಳೂರು-560012.
5. ನಿರ್ದೇಶಕರು, ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯ, ಬಿ.ಎಂ.ಸಿ & ಆರ್.ಐ. ಹಳೆಯ ಕಟ್ಟಡ, ಕೆ.ಆರ್.ರಸ್ತೆ, ಬೆಂಗಳೂರು-02.
6. ಕುಲಸಚಿವರು, ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, 4ನೇ 'ಟಿ' ಬ್ಲಾಕ್, ಜಯನಗರ, ಬೆಂಗಳೂರು-560041.
7. ಅಧ್ಯಕ್ಷರು, ಕರ್ನಾಟಕ ಸ್ಟೇಟ್ ಅಸೋಸಿಯೇಷನ್ ಆಫ್ ದಿ ಮ್ಯಾನೇಜ್‌ಮೆಂಟ್ ಆಫ್ ನರ್ಸಿಂಗ್ & ಅಲೈಡ್ ಹೆಲ್ತ್ ಸೈನ್ಸ್ ಇನ್ಸ್ಟಿಟ್ಯೂಷನ್, ಬೆಂಗಳೂರು
8. ಅಧ್ಯಕ್ಷರು, ಕರ್ನಾಟಕ ಸ್ಟೇಟ್ ಪ್ರೈವೇಟ್ ಮ್ಯಾನೇಜ್‌ಮೆಂಟ್ ಅಸೋಸಿಯೇಷನ್ ಆಫ್ ಹೆಲ್ತ್ ಇನ್ಸ್ಟಿಟ್ಯೂಷನ್ (ರಿ), ಬೆಂಗಳೂರು
9. ಅಧ್ಯಕ್ಷರು, ನವ ಕಲ್ಯಾಣ ಕರ್ನಾಟಕ ನರ್ಸಿಂಗ್ ಇನ್ಸ್ಟಿಟ್ಯೂಟ್ ಮ್ಯಾನೇಜ್‌ಮೆಂಟ್ ಅಸೋಸಿಯೇಷನ್ (ರಿ), ಕಲಬುರಗಿ
10. ಎಲ್ಲಾ ಸರ್ಕಾರಿ ಮತ್ತು ಖಾಸಗಿ ನರ್ಸಿಂಗ್ ಕಾಲೇಜುಗಳಿಗೆ (ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯದ ಮುಖಾಂತರ)
11. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು

<u>ಪ್ರತಿಯನ್ನು ಮಾಹಿತಿಗಾಗಿ:-</u>

1. ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಶಿಕ್ಷಣ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
3. ಸರ್ಕಾರದ ಜಂಟಿ ಕಾರ್ಯದರ್ಶಿಯವರ ಆಪ್ತ ಸಹಾಯಕರು, ವೈದ್ಯಕೀಯ ಶಿಕ್ಷಣ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.